# National
# Kannada
# 01.02.2026 1935 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಸಬ್ ಕಾ ಸಾಥ್– ಸಬ್ ಕಾ ವಿಕಾಸ್ ಪರಿಕಲ್ಪನೆಯಡಿ 53.47 ಲಕ್ಷ ಕೋಟಿ ರೂಪಾಯಿ ವೆಚ್ಚದ ಬಜೆಟ್ ಮಂಡಿಸಿದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್
2. ಕರ್ನಾಟಕಕ್ಕೆ 63 ಸಾವಿರದ 49 ಕೋಟಿ ರೂಪಾಯಿ ತೆರಿಗೆ ಪಾಲು ಹಂಚಿಕೆ
3. ಏಪ್ರಿಲ್ 1 ರಿಂದ ಆದಾಯ ತೆರಿಗೆ ಕಾಯ್ದೆ–2025 ಜಾರಿಗೆ
4. ಆಸ್ಟ್ರೇಲಿಯಾ ಓಪನ್ ಟೆನಿಸ್ ಪ್ರಶಸ್ತಿ ಮುಡಿಗೇರಿಸಿಕೊಂಡ ಕಾರ್ಲೋಸ್ ಅಲ್ಕರಾಜ್
5. 19 ವರ್ಷದೊಳಗಿನವರ ಐಸಿಸಿ ವಿಶ್ವಕಪ್ ಕ್ರಿಕೆಟ್: ಪಾಕಿಸ್ತಾನಕ್ಕೆ 253 ರನ್‌ಗಳ ಗುರಿ ನೀಡಿದ ಭಾರತ

*****************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಲೋಕಸಭೆಯಲ್ಲಿ 2026–27ನೇ ಸಾಲಿನ ಕೇಂದ್ರ ಆಯವ್ಯಯ ಮಂಡಿಸಿದರು. ಇದು ಅವರ ದಾಖಲೆಯ ಸತತ 9ನೇ ಬಜೆಟ್ ಮಂಡನೆಯಾಗಿದೆ.

2026–27ರ ಬಜೆಟ್ ಅಂದಾಜಿನ ಪ್ರಕಾರ, ಒಟ್ಟು ವೆಚ್ಚ 53 ಲಕ್ಷದ 47 ಸಾವಿರದ 315 ಕೋಟಿ ರೂಪಾಯಿಗಳಷ್ಟಿದೆ. ಇದರಲ್ಲಿ ಒಟ್ಟು ಬಂಡವಾಳ ವೆಚ್ಚ 12 ಲಕ್ಷದ 21 ಸಾವಿರದ 821 ಕೋಟಿ ರೂಪಾಯಿಗಳಷ್ಟಿದೆ. ಪರಿಣಾಮಕಾರಿ ಬಂಡವಾಳ ವೆಚ್ಚ 17 ಲಕ್ಷದ 15 ಸಾವಿರದ 523 ಕೋಟಿ ರೂಪಾಯಿಗಳಾಗಿವೆ.

2026–27ರ ಬಜೆಟ್‌ನಲ್ಲಿ ರಾಜ್ಯಗಳ ಪಾಲು, ಅನುದಾನ, ಸಾಲಗಳು ಮತ್ತು ಕೇಂದ್ರ ಪ್ರಾಯೋಜಿತ ಯೋಜನೆಗಳ ಅಡಿಯಲ್ಲಿ ವಿಕೇಂದ್ರೀಕರಣ ಸೇರಿದಂತೆ ರಾಜ್ಯಗಳಿಗೆ ವರ್ಗಾಯಿಸಲಾಗುತ್ತಿರುವ ಒಟ್ಟು ಸಂಪನ್ಮೂಲಗಳು 25 ಲಕ್ಷದ 43 ಸಾವಿರದ 769 ಕೋಟಿ ರೂಪಾಯಿಗಳಷ್ಟಿದ್ದು, ಇದು 2024–25ರ ಹಣಕಾಸು ವರ್ಷದ ವಾಸ್ತವಿಕ ವೆಚ್ಚಕ್ಕಿಂತ 3 ಲಕ್ಷದ 78 ಸಾವಿರದ 263 ಕೋಟಿ ರೂಪಾಯಿಗಳ ಹೆಚ್ಚಳವನ್ನು ತೋರಿಸುತ್ತಿದೆ.

ಈ ಬಾರಿ ರಕ್ಷಣಾ ಕ್ಷೇತ್ರಕ್ಕೆ 6.8 ಲಕ್ಷ ಕೋಟಿ ರೂಪಾಯಿಗಳ ಹಣವನ್ನು ಮೀಸಲಿಡಲಾಗಿದೆ. ಇದು ಕಳೆದ ವರ್ಷಕ್ಕಿಂತ ಸುಮಾರು ಶೇಕಡ 9.53ರಷ್ಟು ಹೆಚ್ಚಳವಾಗಿದೆ. ದೇಶದ ಒಟ್ಟು ಬಜೆಟ್‌ನ ಸುಮಾರು ಶೇಕಡ 13.45 ರಷ್ಟು ಭಾಗವನ್ನು ರಕ್ಷಣೆಗೆ ನೀಡಲಾಗಿದೆ. ಇದು ಎಲ್ಲ ಸಚಿವಾಲಯಗಳಿಗಿಂತ ಅತಿ ಹೆಚ್ಚಿನ ಹಂಚಿಕೆಯಾಗಿದೆ.

*****************

ಬಜೆಟ್‌ನಲ್ಲಿ ರಸ್ತೆ, ರೈಲ್ವೆ, ಮೆಟ್ರೊ, ಬಂದರು ಮತ್ತು ಸರಕು ಸಾಗಣೆಯನ್ನು ಇನ್ನಷ್ಟು ಉತ್ತಮಗೊಳಿಸಲು ಸಾರ್ವಜನಿಕ ಬಂಡವಾಳವನ್ನು 12.2 ಲಕ್ಷ ಕೋಟಿ ರೂಪಾಯಿಗಳಿಗೆ ಹೆಚ್ಚಳ ಮಾಡಲಾಗಿದೆ.

ಇದೇ ವೇಳೆ ಬಜೆಟ್‌ನಲ್ಲಿ ಏಳು ಹೊಸ ಹೈಸ್ಪೀಡ್ ರೈಲುಗಳನ್ನು ಘೋಷಿಸಲಾಗಿದೆ. ಇದರಲ್ಲಿ ಬೆಂಗಳೂರು, ಹೈದರಾಬಾದ್, ಚೆನ್ನೈ, ಪುಣೆ, ವಾರಾಣಸಿ, ಸಿಲಿಗುರಿಯನ್ನು ಸಂಪರ್ಕಿಸುವ ಮಾರ್ಗಗಳಿವೆ. ಆ ಮೂಲಕ ದೇಶದ ಪ್ರಮುಖ ಮೆಟ್ರೊ ನಗರಗಳನ್ನು ಸಂಪರ್ಕಿಸಲಾಗುತ್ತದೆ.

ಹಲವು ಹೊಸ ಜಲಮಾರ್ಗಗಳು, ನಗರ ಮೂಲಸೌಕರ್ಯ ಉತ್ತೇಜನ ಕುರಿತು ಬಜೆಟ್‌ನಲ್ಲಿ ಪ್ರಸ್ತಾಪಿಸಲಾಗಿದೆ. ಇದರಲ್ಲಿ 2 ಹಾಗೂ 3ನೇ ಹಂತದ ಪಟ್ಟಣ ಪ್ರದೇಶಗಳನ್ನೂ ಒಳಗೊಳ್ಳುವ ಭರವಸೆ ನೀಡಲಾಗಿದೆ. ಇವುಗಳಿಂದ ಪ್ರಯಾಣ ಸಮಯ ಕಡಿಮೆ ಮಾಡುವುದು, ಸರಕು ಸಾಗಣೆ ಸುಗಮವಾಗುವಂತೆ ಮತ್ತು ಪೂರಕ ಉದ್ಯೋಗ ಸೃಜಿಸುವ ಯೋಜನೆ ಇದೆ.

ಕೃತಕ ಬುದ್ಧಿಮತ್ತೆ ಆಧಾರಿತ 'ಭಾರತ್ ವಿಸ್ತಾರಾ' ಎಂಬ ಬಹುಭಾಷಾ ಎಐ ಸಾಧನವನ್ನು ಅಭಿವೃದ್ಧಿಪಡಿಸಿ, ರೈತರಿಗೆ ನೆರವಾಗುವ ಯೋಜನೆಯನ್ನು ಬಜೆಟ್‌ನಲ್ಲಿ ಘೋಷಿಸಲಾಗಿದೆ. ಇದರಿಂದ ಕೃಷಿ ಉತ್ಪಾದನೆ ಹೆಚ್ಚಿಸುವ ಗುರಿ ಹೊಂದಲಾಗಿದೆ.

ಗ್ರಾಮೀಣ ಭಾಗದ ಜೀವನಶೈಲಿ ಉತ್ತಮಪಡಿಸುವ ನಿಟ್ಟಿನಲ್ಲಿ ಕಿಸಾನ್ ಕ್ರೆಡಿಟ್ ಕಾರ್ಡ್ ಮತ್ತು ಬೆಳೆ ಆಧಾರಿತ ಯೋಜನೆಯನ್ನು ಇನ್ನಷ್ಟು ಉತ್ತೇಜಿಸಿ ರೈತರ ಆದಾಯ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗಿದೆ.

ಕೃಷಿಯನ್ನು ಮತ್ತಷ್ಟು ಉತ್ತೇಜಿಸುವ ನಿಟ್ಟಿನಲ್ಲಿ 500 ಜಲಾಶಯಗಳ ನಿರ್ಮಾಣಕ್ಕೆ ಅನುದಾನ ಮೀಸಲಿಡಲಾಗಿದೆ. ತೆಂಗು, ಗೇರು, ಕೊಕೊ ಮತ್ತು ಗಂಧದ ಬೆಳೆ ಉತ್ತೇಜಿಸುವ ವಿಶೇಷ ಕಾರ್ಯಕ್ರಮ ರೂಪಿಸುವ ಪ್ರಸ್ತಾವವೂ ಬಜೆಟ್‌ನಲ್ಲಿ ಘೋಷಣೆಯಾಗಿದೆ.

ಸೇವಾ ವಲಯ ಹಾಗೂ ಕೌಶಲ್ಯ ಆಧಾರಿತ ಯೋಜನೆಗಳ ಮೂಲಕ ಗ್ರಾಮಗಳಲ್ಲಿ ಉದ್ಯೋಗ ಹೆಚ್ಚಿಸುವುದು ಮತ್ತು ಜೀವನೋಪಾಯ ತರಬೇತಿ ನೀಡುವ ಯೋಜನೆ ಜಾರಿಗೆ ಬಜೆಟ್‌ನಲ್ಲಿ ಘೋಷಿಸಲಾಗಿದೆ. ಇದರಿಂದ ಕೃಷಿ ಆದಾಯ, ಕೃಷಿ ಕ್ಷೇತ್ರವನ್ನು ಡಿಜಿಟಲೀಕರಣಗೊಳಿಸುವುದು ಮತ್ತು ಗ್ರಾಮೀಣ ಭಾಗದಲ್ಲಿ ಉದ್ಯೋಗಾವಕಾಶವನ್ನು ಹೆಚ್ಚಿಸುವ ಯೋಜನೆ ಹೊಂದಿರುವುದಾಗಿ ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಮಹಾತ್ಮಾ ಗಾಂಧಿ ಗ್ರಾಮ ಸಮಾಜ ಯೋಜನೆ ಮೂಲಕ ಗ್ರಾಮೀಣ ಭಾಗದಲ್ಲಿ ಖಾದಿ ಹಾಗೂ ಇನ್ನಿತರ ಕರಕುಶಲ ಕೈಗಾರಿಕೆಗಳನ್ನು ಉತ್ತೇಜನೆ ನೀಡಲಾಗಿದೆ.

ಬಯೋಫಾರ್ಮ ಶಕ್ತಿ ಯೋಜನೆಯ ಭಾಗವಾಗಿ ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿನ ನಾವೀನ್ಯತೆ ಮತ್ತು ತಯಾರಿಕೆಗೆ 10 ಸಾವಿರ ಕೋಟಿ ರೂಪಾಯಿ ಅನುದಾನ ನೀಡುವುದಾಗಿ ಬಜೆಟ್‌ನಲ್ಲಿ ಘೋಷಣೆಯಾಗಿದೆ. ಪ್ರಮುಖ ಔಷಧಗಳ ಮೇಲಿನ ತೆರಿಗೆ ಕಡಿತದ ಜತೆಗೆ, ಸಾಂಪ್ರದಾಯಿಕ ಚಿಕಿತ್ಸಾ ವಿಧಾನವಾದ ಆಯುರ್ವೇದ ಪದ್ಧತಿಯನ್ನು ಇನ್ನಷ್ಟು ವಿಸ್ತರಿಸಲು ರಾಷ್ಟ್ರವ್ಯಾಪಿ ಮೂರು ವಿಶ್ವವಿದ್ಯಾಲಯ ತೆರೆಯುವ ಪ್ರಸ್ತಾವ ಬಜೆಟ್‌ನಲ್ಲಿದೆ. ಕ್ಯಾನ್ಸರ್ ಔಷಧವು ಅಗತ್ಯವಿರುವ ಪ್ರತಿಯೊಬ್ಬರಿಗೂ ಸಿಗುವಂತೆ ಮಾಡಲು ತೆರಿಗೆ ಕಡಿತ ಕ್ರಮ ಕೈಗೊಳ್ಳಲಾಗಿದೆ.

*****************

ಇದೇ ಏಪ್ರಿಲ್ 1 ರಿಂದ ಆದಾಯ ತೆರಿಗೆ ಕಾಯ್ದೆ-2025 ಜಾರಿಗೆ ಬರಲಿದೆ.

ಲೋಕಸಭೆಯಲ್ಲಿಂದು ಕೇಂದ್ರ ಬಜೆಟ್ ಮಂಡಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಸರಳೀಕೃತ ಆದಾಯ ತೆರಿಗೆ ನಿಯಮಗಳು ಮತ್ತು ನಮೂನೆಗಳ ಕುರಿತು ಶೀಘ್ರದಲ್ಲೇ ಮಾಹಿತಿ ನೀಡಲಾಗುವುದು ಎಂದು ಹೇಳಿದರು.

ನೂತನ ನಿಯಮಗಳು ತೆರಿಗೆದಾರರಿಗೆ ಸಾಕಷ್ಟು ಸಮಯ ನೀಡುತ್ತಿದೆ. ತೆರಿಗೆ ರಿಟರ್ನ್ಸ್ ಸಲ್ಲಿಸುವ ಸಮಯವನ್ನು ವಿಸ್ತರಿಸಲಾಗಿದೆ. ಅಲ್ಲದೇ, ಸಾಮಾನ್ಯ ನಾಗರಿಕರು ಯಾವುದೇ ತೊಂದರೆ ಇಲ್ಲದೆ ಭರ್ತಿ ಮಾಡಲು ಅರ್ಜಿಗಳನ್ನು ಮರುವಿನ್ಯಾಸಗೊಳಿಸಲಾಗಿದೆ ಎಂದು ತಿಳಿಸಿದರು.

ಐಟಿಆರ್-1 ಮತ್ತು ಐಟಿಆರ್-2 ರಿಟರ್ನ್ಸ್ ಹೊಂದಿರುವ ವ್ಯಕ್ತಿಗಳು ಜುಲೈ 31ರವರೆಗೆ ರಿಟರ್ನ್ಸ್ ಸಲ್ಲಿಸುವುದನ್ನು ಮುಂದುವರೆಸಬಹುದು. ಆಡಿಟ್ ಮಾಡದ ವ್ಯವಹಾರ ಪ್ರಕರಣಗಳು ಅಥವಾ ಟ್ರಸ್ಟ್‌ಗಳಿಗೆ ಆಗಸ್ಟ್ 31 ರವರೆಗೆ ಸಮಯಾವಕಾಶ ನೀಡಲು ಪ್ರಸ್ತಾಪಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

*****************

ಉತ್ತರ ಭಾರತದಲ್ಲೂ ಮಾನಸಿಕ ಆರೋಗ್ಯ ಚಿಕಿತ್ಸೆ ಲಭ್ಯವಾಗುವಂತೆ ಮಾಡಲು ನಿಮ್ಹಾನ್ಸ್ ಎರಡನೇ ಘಟಕವನ್ನು ತೆರೆಯಲಾಗುವುದು. ಅಲ್ಲದೇ ರಾಂಚಿ, ತೇಜಪುರದಲ್ಲಿ ಇರುವ ಮಾನಸಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗುವುದು ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಉನ್ನತ ಶಿಕ್ಷಣಕ್ಕೆ ಇನ್ನಷ್ಟು ಉತ್ತೇಜನ ನೀಡುವ ದೃಷ್ಟಿಯಿಂದ ದೇಶದ ಐದು ನಗರಗಳಲ್ಲಿ ವಿಶ್ವವಿದ್ಯಾಲಯ ಟೌನ್‌ಶಿಪ್‌ಗಳನ್ನು ಘೋಷಿಸಲಾಗಿದೆ. ಆ ಮೂಲಕ ಶಿಕ್ಷಣ ಮತ್ತು ಕೌಶಲವು ಒಂದು ಕಡೆ ಸಿಗುವಂತೆ ಮಾಡುವ ಉದ್ದೇಶ ಹೊಂದಲಾಗಿದೆ. ಕೃತಕ ಬುದ್ಧಿಮತ್ತೆಯನ್ನೂ ಒಳಗೊಂಡು ತಂತ್ರಜ್ಞಾನ ಆಧಾರಿತ ಕಲಿಕಾ ಪದ್ಧತಿಯನ್ನು ಉತ್ತೇಜಿಸಲಾಗುವುದು. ಬಾಲಕಿಯರ ಶಿಕ್ಷಣ ಪ್ರಮಾಣ ಹೆಚ್ಚಿಸಲು ಪ್ರತಿ ಜಿಲ್ಲೆಯಲ್ಲಿ ವಿದ್ಯಾರ್ಥಿನಿಯರ ನಿಲಯ ತೆರೆಯಲಾಗುವುದು ಎಂದು ಕೇಂದ್ರ ಹಣಕಾಸು ಸಚಿವರು ಘೋಷಿಸಿದ್ದಾರೆ.

ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳನ್ನು ಇನ್ನಷ್ಟು ಬಲಪಡಿಸಲು ಮತ್ತು ಜಾಗತಿಕ ಸ್ಪರ್ಧೆಗೆ ಅವುಗಳನ್ನು ಸಜ್ಜುಗೊಳಿಸಲು 10 ಸಾವಿರ ಕೋಟಿ ರೂಪಾಯಿ ನೆರವನ್ನು ಬಜೆಟ್‌ನಲ್ಲಿ ಘೋಷಿಸಲಾಗಿದೆ.

ಭಾರತದ ಮತದಾರರ ಸಂಖ್ಯೆ ಹೆಚ್ಚಾದಂತೆ, ಮತದಾರರ ಗುರುತಿನ ಚೀಟಿಗಳಿಗಾಗಿ ಕಾನೂನು ಸಚಿವಾಲಯಕ್ಕೆ ಬಜೆಟ್‌ನಲ್ಲಿ 250 ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದ್ದು, ಲೋಕಸಭಾ ಚುನಾವಣೆಗೆ ಸಂಬಂಧಿಸಿದ ವೆಚ್ಚಕ್ಕಾಗಿ ಇನ್ನೂ 500 ಕೋಟಿ ರೂಪಾಯಿ ಮೀಸಲಿಡಲಾಗಿದೆ.

ಇದೇ ವೇಳೆ, ಮೊದಲ ಬಾರಿಗೆ ಕೇಂದ್ರ ಬಜೆಟ್‌ನಲ್ಲಿ ಕ್ರೀಡಾ ಸಾಮಗ್ರಿಗಳ ಉತ್ಪಾದನಾ ವಲಯಕ್ಕೆ 500 ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ. ರಾಷ್ಟ್ರೀಯ ಶಿಬಿರಗಳನ್ನು ನಡೆಸುವ ಮತ್ತು ಕ್ರೀಡಾಪಟುಗಳಿಗೆ ತರಬೇತಿ ನೀಡುವ ನೋಡಲ್ ಸಂಸ್ಥೆಯಾದ ಭಾರತೀಯ ಕ್ರೀಡಾ ಪ್ರಾಧಿಕಾರಕ್ಕೆ 917.38 ಕೋಟಿ ರೂಪಾಯಿ ಮೀಸಲಿಡಲಾಗಿದೆ.

*****************

ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ 2026–27ನೇ ಸಾಲಿನಲ್ಲಿ 63 ಸಾವಿರದ 49 ಕೋಟಿ ರೂಪಾಯಿ ತೆರಿಗೆ ಪಾಲು ಹಂಚಿಕೆ ಮಾಡಿದೆ.

16ನೇ ಹಣಕಾಸು ಆಯೋಗದ ಅನ್ವಯ ಕರ್ನಾಟಕಕ್ಕೆ ಶೇಕಡ 4.13 ತೆರಿಗೆ ಪಾಲು ಹಂಚಿಕೆಗೆ ಶಿಫಾರಸು ಮಾಡಿದೆ. 15ನೇ ಹಣಕಾಸು ಆಯೋಗವು ಶೇಕಡ 3.64 ಹಂಚಿಕೆ ಮಾಡಿತ್ತು. ಕಳೆದ ಸಾಲಿಗೆ ಹೋಲಿಸಿದರೆ, ಈ ಸಾಲಿನಲ್ಲಿ ಕರ್ನಾಟಕಕ್ಕೆ ತೆರಿಗೆ ಪಾಲು ಹಂಚಿಕೆಯಲ್ಲಿ ಏರಿಕೆಯಾಗಿದೆ.

*****************

ಕೇಂದ್ರ ಬಜೆಟ್ ಹಿನ್ನೆಲೆಯಲ್ಲಿ ಮುಂಬೈ ಷೇರು ಮಾರುಕಟ್ಟೆ ಇಂದು ಏರಿಳಿತಕ್ಕೆ ಸಾಕ್ಷಿಯಾಯಿತು. ಷೇರು ಸಂವೇದಿ ಸೂಚ್ಯಂಕ–ಸೆನ್ಸೆಕ್ಸ್ ಒಂದು ಸಾವಿರದ 547 ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ 80 ಸಾವಿರದ 723 ಅಂಕಗಳು ದಾಖಲಾಗಿದೆ.

ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ–ನಿಫ್ಟಿ 495 ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ 24 ಸಾವಿರದ 825 ಅಂಕಗಳು ದಾಖಲಾಗಿದೆ.

*****************

ಸ್ಪೇನ್‌ನ ಯುವ ಟೆನಿಸ್ ಆಟಗಾರ ಕಾರ್ಲೋಸ್ ಅಲ್ಕರಾಜ್ ಆಸ್ಟ್ರೇಲಿಯಾ ಓಪನ್ ಟೆನಿಸ್ ಪ್ರಶಸ್ತಿ ವಿಜೇತರಾಗಿದ್ದಾರೆ. ಈ ಮೂಲಕ ಅವರು ವೃತ್ತಿಜೀವನದ ಗ್ರಾ ್ಯಂಡ್ ಸ್ಲ್ಯಾಮ್ ಅನ್ನು ಪೂರ್ಣಗೊಳಿಸಿದ್ದಾರೆ.

ಮೆಲ್ಬರ್ನ್‌ನಲ್ಲಿ ಇಂದು ನಡೆದ ಫೈನಲ್ ಪಂದ್ಯದಲ್ಲಿ ಸರ್ಬಿಯಾದ ನೋವಾಕ್ ಜೋಕೊವಿಕ್ ಅವರನ್ನು 2–6, 6–2, 6–3, 7–5 ಸೆಟ್‌ಗಳಿಂದ ಮಣಿಸಿದ್ದಾರೆ.

*****************

ಜಿಂಬಾಬ್ವೆಯ ಬುಲವಾಯೋದಲ್ಲಿ ನಡೆಯುತ್ತಿರುವ ಐಸಿಸಿ 19 ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್ 2026 ರ ಇಂದಿನ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ, 49.5 ಓವರ್‌ಗಳಿಗೆ 252 ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿದೆ.

ಗೆಲುವಿನ ಗುರಿ ಬೆನ್ನತ್ತಿದ ಪಾಕಿಸ್ತಾನ, ಇತ್ತೀಚಿನ ವರದಿಯಂತೆ 10.4 ಓವರ್‌ಗಳಲ್ಲಿ 1 ವಿಕೆಟ್ ನಷ್ಟಕ್ಕೆ 63 ರನ್ ಮಾಡಿ ಆಡುತ್ತಿದೆ.

*****************

ಇಂದು ಮಂಡಿಸಲಾದ ಕೇಂದ್ರ ಬಜೆಟ್ 2047ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ದೃಷ್ಟಿಕೋನದತ್ತ ಭಾರತವನ್ನು ಕೊಂಡೊಯ್ಯಲಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಪ್ರತಿಪಾದಿಸಿದರು.

ದೆಹಲಿಯಲ್ಲಿಂದು ಬಜೆಟ್ ನಂತರದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಈ ಬಜೆಟ್ 'ಸಬ್ ಕಾ ಸಾತ್, ಸಬ್ ಕಾ ವಿಕಾಸ್' ಗುರಿಯನ್ನು ಹೊಂದಿದೆ. ಈ ವರ್ಷದ ಬಜೆಟ್‌ನಲ್ಲಿ ಆರೋಗ್ಯಕ್ಕೆ ಸಮಾನ ಪ್ರಾಮುಖ್ಯತೆ ನೀಡಲಾಗಿದೆ. ಮಾನಸಿಕ ಆರೋಗ್ಯಕ್ಕೆ ವಿಶೇಷ ಒತ್ತು ನೀಡಲಾಗಿದೆ ಎಂದು ಅವರು ಹೇಳಿದರು.

*****************

ಭಾರತವನ್ನು ಮುಂದುವರೆದ ರಾಷ್ಟ್ರವನ್ನಾಗಿ ರೂಪಿಸಲು ಕೇಂದ್ರ ಬಜೆಟ್–2026 ಪೂರಕವಾಗಿದೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಸಚಿವ ಎನ್.ಮಹೇಶ್ ಹೇಳಿದ್ದಾರೆ.

ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿಗೆ ದೊಡ್ಡಪಾಲು ನೀಡುವ ರಾಜಧಾನಿ ಬೆಂಗಳೂರಿಗೆ ಹೈ ಸ್ಪೀಡ್ ರೈಲು, ಪ್ರವಾಸೋದ್ಯಮಕ್ಕೆ ಉತ್ತೇಜನ, ಉದ್ಯಮಕ್ಕೆ ಉತ್ತೇಜನದ ಮೂಲಕ ಅಭಿವೃದ್ಧಿಗೆ ವೇಗ ನೀಡುವ ಬಜೆಟ್ ಅನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ಎನ್.ಮಹೇಶ್

*****************

ಕೇಂದ್ರ ಬಜೆಟ್ ಜನಸ್ನೇಹಿಯಾಗಿದೆ. ಮುಖ್ಯವಾಗಿ ಮಾಹಿತಿ ತಂತ್ರಜ್ಞಾನ, ಕೃಷಿ ಹಾಗೂ ಜವಳಿ ಕ್ಷೇತ್ರಕ್ಕೆ ಅನುದಾನ ನೀಡಿರುವುದು ಸ್ವಾಗತಾರ್ಹವಾಗಿದೆ ಎಂದು ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜು ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಮುಖ ನೇಕಾರಿಕೆಗೆ ಸಂಬಂಧಿಸಿದಂತೆ ನೂತನ ಜವಳಿ ನೀತಿ ಪೂರಕವಾಗಲಿದ್ದು, ಯುವಕರಿಗೆ ಉದ್ಯೋಗ, ಎ.ಐ. ತಂತ್ರಜ್ಞಾನದ ಮೂಲಕ ಕೃಷಿಕರಿಗೆ ಮಾಹಿತಿ ಮೊದಲಾದ ಯೋಜನೆಗಳು ಉತ್ತಮವಾಗಿವೆ ಎಂದು ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

******** ಮುಕ್ತಾಯ ********